ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 26-03-2021 ಪ್ರಶ್ನೆ ಸಂಖ್ಯೆ : 1907(2261)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಎಂ. ಎ. ಗೋಪಾಲಸ್ವಾಮಿ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 26-03-2021

ಉತ್ತರಿಸುವ ಸಚಿವರು: ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು

ವಿಷಯ : ಅಲ್ಪಸಂಖ್ಯಾತರ ಇಲಾಖೆಯ ಕಾರ್ಯಕ್ರಮಗಳ ಬಗ್ಗೆ

(ಅ) ಕಳೆದ 3 ವರ್ಷಗಳಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ ಹಾಸನ ಜಿಲ್ಲೆಗೆ ವಿವಿಧ ಯೋಜನೆಗಳಡಿ ಮಂಜೂರಾದ ಅನುದಾನವೆಷ್ಟು; ಹಾಗೂ ಬಿಡುಗಡೆಯಾದ ಅನುದಾನವೆಷ್ಟು; ಬಿಡುಗಡೆಯಾಗದೇ ಬಾಕಿ ಉಳಿದಿರುವ ಅನುದಾನವೆಷ್ಟು; ಬಾಕಿ ಉಳಿಯಲು ಕಾರಣಗಳೇನು; ಇದನ್ನು ಯಾವ ಕಾಲಮಿತಿಯಲ್ಲಿ ಬಿಡುಗಡೆ ಮಾಡಲಾಗುವುದು; (ವಿವರ ನೀಡುವುದು)

(ಆ) ಈ ಅನುದಾನದಲ್ಲಿ ಕೈಗೊಂಡ ಕಾಮಗಾರಿಗಳು ಯಾವುವು; ಈ ಕಾಮಗಾರಿಗಳ ಮೊತ್ತವೆಷ್ಟು; ಕಾಮಗಾರಿಗಳನ್ನು ನಿರ್ವಹಿಸಿದÀ ಗುತ್ತಿಗೆದಾರರು ಯಾರು; (ಕಾಮಗಾರಿ ಹೆಸರು, ತಾಲ್ಲೂಕಿನ ಮತ್ತು ಗ್ರಾಮದ ವಿವರ ನೀಡುವುದು)

(ಇ) ಹಾಸನ ಜಿಲ್ಲೆಯಲ್ಲಿ ಅಲ್ಪಸಂಖ್ಯಾತರು ಹೆಚ್ಚಿನ ಸಂಖ್ಯೆಯಲ್ಲಿದ್ದು, ಮೂಲ ಸೌಲಭ್ಯಗಳಿಲ್ಲದೆ ಅವರು ಹಿಂದುಳಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಅಲ್ಪಸಂಖಾತರಿಗೆ ಮೂಲ ಸೌಲಭ್ಯಗಳನ್ನು ಕಲ್ಪಿಸಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು? (ವಿವರ ನೀಡುವುದು)